ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ

ಸಿ.ಸಿ. ಸಂಖ್ಯೆಃ **986/2024**

ಪಿರ್ಯಾದಿ : ರಾಜ್ಯ, ಪರವಾಗಿ ಮೂಡಿಗೆರೆ ಪೊಲೀಸ್ ಠಾಣೆ,

ವಿರುದ್ಧ

ಆರೋಪಿ : ರವಿ ಎಂ.ಕೆ., ವಯಸ್ಸು 60 ವರ್ಷ,
ಬಿನ್ ಕೃಷ್ಣೇಗೌಡ,
ವಾಸಃ ಮಗ್ಗಲಮಕ್ಕಿ ಗ್ರಾಮ,
ದಾರದಹಳ್ಳಿ ಅಂಚೆ, ಮೂಡಿಗೆರೆ ತಾಲ್ಲೂಕು.

ದೋಷಾರೋಪಣೆ

ಶ್ರೀ. ವಿಶ್ವನಾಥ್ ಎ., ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆಗಳು ಏನೆಂದರೆಃ-

ದಿನಾಂಕ 27.12.2023 ರಂದು ಬೆಳಗ್ಗೆ 11.30 ರ ಸಮಯದಲ್ಲಿ ಮೂಡಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಯ, ದಾರದಹಳ್ಳಿ ಗ್ರಾಮದ ಚಾಸಾ-3 ರುದ್ರೇಶ್ ಎಂ.ವಿ. ರವರ ಬಾಬ್ತು ಸರ್ವೆ ನಂ.118/ಪಿ ರಲ್ಲಿ ಚಾಸಾ-1 ಶಾಲಿನಿ ಜಿ.ಸಿ., ಚಾಸಾ-2 ಮೊಹಕ್ ಎಂ.ಆರ್., ಮತ್ತು ಚಾಸಾ-3 ರವರು ಇದ್ದಾಗ ಆರೋಪಿಯಾದ ನೀವು ಚಾಸಾ-1 ರವರೊಂದಿಗೆ ಜಮೀನಿನ ವಿಚಾರವಾಗಿ ಹಳೇ ದ್ವೇಷದಿಂದ ಜಗಳ ತೆಗೆದು ಅವರ ಜಮೀನಿಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **447** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**2**. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮುಂದುವರೆದು, ಹಳೇ ದ್ವೇಷದಿಂದ ಜಗಳ ತೆಗೆದು ಚಾಸಾ1 ರವರ ಎಡಗೈಗೆ ಮಣಿಕಟ್ಟಿನ ಹತ್ತಿರ ಕಚ್ಚಿ , ಕುತ್ತಿಗೆ ಹಾಗೂ ಬೆನ್ನಿಗೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **324** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**3**. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮುಂದುವರೆದು, ಜಗಳ ಬಿಡಿಸಲು ಬಂದ ಚಾಸಾ-1 ಹಾಗೂ 3 ರವರನ್ನು ತಳ್ಳಿ ನೋವುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **323** ರಡಿಯಲ್ಲಿ

ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

**4**. ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಮುಂದುವರೆದು, ಜಗಳ ಬಿಡಿಸಲು ಬಂದ ಚಾಸಾ-3 ರವರಿಗೆ ಸೂಳೆ ಮಗನೇ ಎಂದು ಅವಾಚ್ಯ ಶಬ್ಧಗಳಿಂದ ಬೈದಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತ ದಂಡ ಸಂಹಿತೆ ಕಲಂ **504** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿಗೆ ದಿನಾಂಕ 28.11.2024 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

ಸಹಿ/-

ಮೂಡಿಗೆರೆ
ದಿನಾಂಕಃ 28.11.2024

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ.